**ಕರ್ನಾಟಕ ಸರ್ಕಾರದ ನಡವಳಿಗಳು**

*ವಿಷಯ:-* ಶ್ರೀ ಡಿ.ವೆಂಕಟರಮಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಮಹಾಂತೇಶಗೌಡ, ಸಹಾಯಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯವರನ್ನು ನೇಮಿಸುವ ಬಗ್ಗೆ-ಆದೇಶ.

*ಓದಲಾಗಿದೆ:*

*1.* ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ ಇವರ ಪತ್ರ ಸಂಖ್ಯೆ:ಅಅ/ಗ್ರಾ.ಕು.ನೀ& ನೈ/ವೃ/ಕ/ದೊಪ/ತಾಸ/2016-17/975, ದಿ:22.11.2016

*2.* ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 29 ಇಎನ್‌ಕ್ಯೂ 16, ದಿ:13.1.2007.

*3.* ಅಪಾದಿತರ ವಿವರಣೆ ದಿನಾಂಕ:

1. ಡಿ.ವೆಂಕಟರಮಣ, ದಿನಾಂಕ:31.3.2017.
2. ಮಹಾಂತೇಶಗೌಡ· ದಿ:31.3.2017.

***ಪ್ರಸ್ತಾವನೆ:-***

ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:22.11.2016 ರ ಪತ್ರದೊಂದಿಗೆ ಬಳ್ಳಾರಿ ತಾಲೂಕಿನ ಮಿಂಚೇರಿ ಹಾಗೂ ಇತರೆ 04 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಲ್ಲಿ ನಿಯಮಾನುಗಳನುಸಾರ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳದೇ ವಿಫಲರಾಗಿ, ಸರ್ಕಾರಕ್ಕೆ ಹೆಚ್ಚುವರಿ ಆರ್ಥಿಕ ಹೊರೆ ಉಂಟಾಗಲು ಕಾರಣರಾಗಿರುವ ಆರೋಪಗಳಿಗೆ ಸಂಬಂಧಿಸಿದಂತೆ ಶ್ರೀ ಡಿ.ವೆಂಕಟರಮಣ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಮಹಾಂತೇಶಗೌಡ, ಸಹಾಯಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ ಇವರುಗಳ ವಿರುದ್ಧ ಇಲಾಖೆ ವಿಚಾರಣೆ ಕೈಗೊಳ್ಳಲು ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ ಇವರು ಆರೋಪ ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರು.

ಸರ್ಕಾರವು ಅಧೀಕ್ಷಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ ಇವರ ಆರೋಪ ಪಟ್ಟಿಯೊಂದಿಗಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಮಹಾಂತೇಶಗೌಡ, ಸಹಾಯಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ ಇವರ ವಿರುದ್ಧ ಕ.ನಾ.ಸೇ (ವ.ನಿ.,ಮೇ) ನಿಯಮಗಳ ನಿಯಮ 11 ರಡಿ ಇಲಾಖಾ ವಿಚಾರಣೆ ನಡೆಸಲು ತೀರ್ಮಾನಿಸಿ, ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:13.1.2017 ರಂದು ಕಾರಣ ಕೇಳುವ ನೋಟಿಸ್‌ನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಜಾರಿ ಮಾಡಲಾಗಿತ್ತು.

ಇಬ್ಬರು ಅಪಾದಿತರು ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕಗಳಲ್ಲಿ ವಿವರಣೆ ಸಲ್ಲಿಸಿ, ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಆರೋಪಗಳು ಅದಕ್ಕೆ ಸಂವಾದಿಯಾಗಿ ಅಪಾದಿತರು ಸಲ್ಲಿಸಿರುವ ವಿವರಣೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಪ್ರಸಕ್ತ ಪ್ರಕರಗಳಲ್ಲಿ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ವಿಚಾರಣಾಧಿಕಾರಿಯವರನ್ನು ನೇಮಕಗೊಳಿಸಿ, ಇಲಾಖೆ ವಿಚಾರಣೆಯನ್ನು ಜರುಗಿಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ: ಗ್ರಾಅಪ 29 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ:07.6.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, ಶ್ರೀ ಡಿ.ವೆಂಕಟರಮಣ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಮಹಾಂತೇಶಗೌಡ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬಳ್ಳಾರಿ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು

---2

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಡಿ ನಡೆಸಲು ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀ ಜೆ.ಎಸ್.ಸೋಮಶೇಖರ್ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11 (5)(ಸಿ) ರನ್ವಯ ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು. ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆ ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

07/06/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ಜಲ ಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ,
3. ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ.
6. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
9. ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
10. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಮುಖಾಂತರ)
11. ಶ್ರೀ ಜೆ.ಎಸ್.ಸೋಮಶೇಖರ್, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.1327, 11 ನೇ ಮುಖ್ಯ ರಸ್ತೆ, ಜಿ.ಕೆ.ವಿ.ಕೆ. ಅಂಚೆ, ಯಲಹಂಕ, ಬೆಂಗಳೂರು-560065 (ಮೊ.ಸಂ.9449162238)
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ, ಉಪ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
14. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.